RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-III<br>Part-III | ಬೆಂಗಳೂರು, ಬುಧವಾರ, ಡಿಸೆಂಬರ್ ೨೮, ೨೦೧೬ (ಪುಷ್ಯ ೭, ಶಕ ವರ್ಷ ೧೯೩೮)<br>**Bengaluru, Wednesday, December 28, 2016 ( Pushya 7, Shaka Varsha 1938)** | ನಂ. ೧೫೨೪<br>**No. 1524** |
|---|---|---|

## ಕಾರ್ಮಿಕ ಸಚಿವಾಲಯ

### ಅಧಿಸೂಚನೆ

ಸಂಖ್ಯೆ: ಕಾಇ 25 ಎಲ್‌ಎಂಡಬ್ಲ್ಯೂ 2014, ಬೆಂಗಳೂರು, ದಿನಾಂಕ:27-12-2016.

ಕರ್ನಾಟಕ ರಾಜ್ಯಾದ್ಯಂತ **"ಹಾಸ್ಟೆಲ್ (ವಸತಿ ನಿವಾಸ)"** ಉದ್ದಿಮೆಗಳಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕನಿಷ್ಠ ವೇತನವನ್ನು ಪರಿಷ್ಕರಿಸಲು ಸರ್ಕಾರದ ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯಪತ್ರದ ಭಾಗ-4ಎ ರಲ್ಲಿ ದಿನಾಂಕ:30-10-2014 ರಂದು ಪ್ರಕಟಿಸಿ 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರದ ಕಾಯ್ದೆ ಸಂಖ್ಯೆ: XI) ಕಲಂ 5ರ ಉಪಕಲಂ 1ರ (ಬಿ) ಖಂಡದ ಮೇರೆಗೆ ಬಾಧಿತರಾಗುವ / ಸಂಬಂಧವಿರುವ ವ್ಯಕ್ತಿಗಳ ಗಮನಕ್ಕೆ ತರಲಾಗಿದ್ದು, ಅವರಿಂದ ಸಲಹೆ / ಆಕ್ಷೇಪಣೆಗಳನ್ನು ಸ್ವೀಕರಿಸಲು ಎರಡು ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಅವರಿಂದ ಯಾವುದೇ ಸಲಹೆ / ಆಕ್ಷೇಪಣೆಗಳು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. ನಂತರ, ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಮುಂದೆ ಮಂಡಿಸಲಾಗಿತ್ತು. ಸದರಿ ಮಂಡಳಿಯಲ್ಲಿ ಸರ್ಕಾರದ ಪ್ರಸ್ತಾವನೆಯನ್ನು ಸುಧೀರ್ಘವಾಗಿ ಸಮಾಲೋಚಿಸಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲು ಮಂಡಳಿಯು ಸರ್ಕಾರಕ್ಕೆ ತನ್ನ ಶಿಫಾರಸ್ಸನ್ನು ನೀಡಿರುತ್ತದೆ. ಸದರಿ ಶಿಫಾರಸ್ಸುಗಳನ್ನು ಪರಿಗಣಿಸಿ, ಸರ್ಕಾರವು ಅಧಿಸೂಚನೆ ಸಂಖ್ಯೆ: ಕಾಇ 25 ಎಲ್‌ಎಂಡಬ್ಲ್ಯೂ 2014ನ್ನು ದಿನಾಂಕ:03-08-2015ರಂದು ಹೊರಡಿಸಿತ್ತು.

**"ಹಾಸ್ಟೆಲ್ (ವಸತಿ ನಿವಾಸ)"** ಉದ್ದಿಮೆಯ ಮಾಲೀಕರುಗಳು ರಿಟ್ ಅರ್ಜಿ ಸಂಖ್ಯೆ:7556/2016ರಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: **ಕಾಇ 25 ಎಲ್‌ಎಂಡಬ್ಲ್ಯೂ 2014.** ದಿನಾಂಕ:03-08-2015ನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದರು. ಸದರಿ ರಿಟ್ ಅರ್ಜಿ ಸಂಖ್ಯೆ:7556/2016ರಲ್ಲಿ ದಿನಾಂಕ:22.02.2016ರಂದು ಕರ್ನಾಟಕ ರಾಜ್ಯ ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತಡೆಯಾಜ್ಞೆಯಲ್ಲಿ ಕೆಳಕಂಡಂತೆ ಆದೇಶಿಸಿರುತ್ತದೆ:-

"There shall be interim stay of implementation of the impugned Notification dated: 03-08-2015 (Annexure-C) subject to the condition that petioner shall pay 75% of the amount specified for the different categories under the said Notification dated: 03-08-2015 with prospective effect from the date of Notification".

ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ಮಧ್ಯಂತರ ಆದೇಶದನ್ವಯ ನಿಗದಿಪಡಿಸಲಾದ ಶೇ. 75 ಕನಿಷ್ಠ ವೇತನವನ್ನು ದಿನಾಂಕ:03-08-2015ರಿಂದ ದಿನಾಂಕ:31-12-2016ರವರೆಗೆ ಉದ್ಯೋಗದಾತರು ನೀಡಬೇಕಾಗಿರುತ್ತದೆ. ಸರ್ಕಾರವು ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ದಿನಾಂಕ:03-08-2015ರಿಂದ ದಿನಾಂಕ:31-12-2016ರವರೆಗೆ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಲ್ಲಿ ನಿಗದಿಪಡಿಸಿದ ಶೇ. 75 ವೇತನವನ್ನು ಈ ಅವಧಿಯ ಕನಿಷ್ಠ ವೇತನವೆಂದು ಪರಿಗಣಿಸಿ ಅದನ್ನೇ ಸ್ಥಿರಿಕರಿಸಿರುತ್ತದೆ. ಇದರಿಂದಾಗಿ, ದಿನಾಂಕ:03-08-2015ರಿಂದ ದಿನಾಂಕ: 31-12-2016ರ ಅವಧಿಗೆ ಹಿಂಬಾಕಿ ವೇತನ ನೀಡುವ ಪ್ರಮೇಯ ಉದ್ಭವಿಸುವುದಿಲ್ಲ.

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 43384-43428/2016 (L-MW) ದಿನಾಂಕ:06-09-2016ರಲ್ಲಿ ನೀಡಿರುವ ತೀರ್ಪಿನ ಕಂಡಿಕೆ-8 ಮತ್ತು 9ರಲ್ಲಿ ಈ ಕೆಳಕಂಡಂತೆ ನಿರ್ಣಯಿಸಿರುತ್ತದೆ.

"8. There is no requirement in law that while establishing an economic policy, the Government is required to give reasons for deviating, or for overlooking the recommendations of the committee. The Government is free to accept, modify, or reject the recommendations of the committee. Therefore, the contention raised by the learned counsel, that reasons need to be stated in the notification if the State disagrees with the advice tendered by the committee, is clearly untenable.

"9. In catena of cases, the Hon'ble Supreme Court has clearly opined that economic policies are prerogative of the Government. While the High Courts, under its writ jurisdiction, may examine "the legality" of economic policy, but they are not to examine the "soundness" of the economic policy. The jurisdiction for interfering with the economic policy by the Government is, thus, extremely narrow. It is arena where angels fear to tread; the High Courts, under its writ jurisdiction, is not expected to rush in like a fool where angels fear to tread".

ಈ ಬಗ್ಗೆ ದಿನಾಂಕ:09-12-2016ರಂದು ಸಂಬಂಧಪಟ್ಟ ಕಾರ್ಮಿಕ ಸಂಘಗಳು ಹಾಗೂ ಉದ್ದಿಮೆದಾರರುಗಳ ಸಭೆಯನ್ನು ಸರ್ಕಾರದ ಮಟ್ಟದಲ್ಲಿ ನಡೆಸಿದ್ದು, ಸದರಿ ಸಭೆಗಳಲ್ಲಿ ಉಭಯ ಪಕ್ಷಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದು, ಸರ್ಕಾರವು ಪ್ರಸಕ್ತ ಸನ್ನಿವೇಶಕ್ಕೆ ಸರಿ ಹೊಂದುವಂತಹ ಕನಿಷ್ಠ ವೇತನ ನಿಗದಿಪಡಿಸುವ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಿ, ದೇಶದ ವಿವಿಧ ರಾಜ್ಯಗಳ ಕನಿಷ್ಠ ವೇತನವನ್ನು ಪರಿಗಣಿಸಿ, ಪ್ರಸಕ್ತದಲ್ಲಿ ಈ ಕೆಳಕಂಡಂತೆ ಕನಿಷ್ಠ ವೇತನವನ್ನು ನಿಗದಿಪಡಿಸಿರುತ್ತದೆ.

ರಿಟ್ ಅರ್ಜಿ ಸಂಖ್ಯೆ:50699-184/2015ರಲ್ಲಿ ದಿನಾಂಕ:28.10.2016ರಂದು ಕರ್ನಾಟಕ ರಾಜ್ಯ ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಶಿಫಾರಸ್ಸನ್ನು ಗಣನೆಗೆ ತಗದುಕೊಂಡು, 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರ ಕಾಯಿದೆ ಸಂಖ್ಯೆ: XI) ಕಲಂ 3ರ ಉಪಕಲಂ (1)ರ (ಬಿ)ರ ಖಂಡ ಹಾಗೂ ಕಲಂ 5ರ ಉಪಕಲಂ (1)ನೇ (ಬಿ) ಮತ್ತು 5[2] ಖಂಡದ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ್ತು ಈ ಹಿಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ, ಕರ್ನಾಟಕ ರಾಜ್ಯಾದ್ಯಂತ **"ಹಾಸ್ಟೆಲ್ (ವಸತಿ ನಿವಾಸ)"** ಉದ್ದಿಮೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ದಿನಾಂಕ:01-01-2017ರಿಂದ ಅನ್ವಯವಾಗುವಂತೆ ಕನಿಷ್ಠ ವೇತನವನ್ನು ಈ ಅಧಿಸೂಚನೆಯ ಅನುಸೂಚಿಯಲ್ಲಿ ಇರುವಂತೆ ಪರಿಷ್ಕರಿಸಲಾಗಿದೆ.

**ಅನುಸೂಚಿ**

| ಕ್ರ.ಸಂ | ಕೆಲಸದ ವರ್ಗಗಳು | ಕನಿಷ್ಠ ವೇತನ ದರಗಳು | | | | | |
|---|---|---|---|---|---|---|---|
| | | ವಲಯ-1 | | ವಲಯ-2 | | ವಲಯ-3 | |
| | | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| 1 | ವಾರ್ಡನ್ | 437-00 | 11362-00 | 426-00 | 11076-00 | 397-00 | 10322-00 |
| 2 | ಮೆಸ್ ಸೂಪರ್‌ವೈಸರ್ | 422-00 | 10972-00 | 411-00 | 10686-00 | 384-00 | 9984-00 |
| 3 | ಮೇಟ್ರನ್ | | | | | | |
| 4 | ಅಸಿಸ್ಟೆಂಟ್ ವಾರ್ಡನ್ | | | | | | |
| 5 | ಮುಖ್ಯ ಅಡಿಗೆಯವರು | 417-00 | 10842-00 | 406-00 | 10556-00 | 379-00 | 9854-00 |
| 6 | ಅಡಿಗೆಯವರು | | | | | | |
| 7 | ಗ್ರೈಂಡರ್ | 400-00 | 10400-00 | 390-00 | 10140-00 | 364-00 | 9464-00 |
| 8 | ಸಹಾಯಕರು | | | | | | |
| 9 | ಮೆಸ್ ಬಾಯ್ | | | | | | |
| 10 | ಸಪ್ಲೈಯರ್/ಸರಬರಾಜು ಮಾಡುವವರು | | | | | | |
| 11 | ಆಯಾ | 385-00 | 10010-00 | 375-00 | 9750-00 | 350-00 | 9100-00 |
| 12 | ಸೇವಕರು | | | | | | |
| 13 | ಹೆಲ್ಪರ್ | | | | | | |
| 14 | ಗಾರ್ಡನರ್ | | | | | | |

| | | | | | | | |
|---|---|---|---|---|---|---|---|
| | ಕಛೇರಿ ಸಿಬ್ಬಂದಿ | | | | | | |
| 1 | ಮ್ಯಾನೇಜರ್/ ಪರ್ಸನಲ್ ಆಫೀಸರ್/ಮೆಸ್ ವ್ಯವಸ್ಥಾಪಕರು | 511-00 | 13286-00 | 497-00 | 12922-00 | 464-00 | 12064-00 |
| 2 | ಅಸಿಸ್ಟೆಂಟ್‌ಮ್ಯಾನೇಜರ್/ ಅಸಿಸ್ಟೆಂಟ್‌ಪರ್ಸನಲ್ ಮ್ಯಾನೇಜರ್ | 494-00 | 12844-00 | 481-00 | 12506-00 | 449-00 | 11674-00 |
| 3 | ಅಕೌಟೆಂಟ್ | 476-00 | 12376-00 | 464-00 | 12064-00 | 433-00 | 11258-00 |
| 4 | ಕ್ಯಾಷಿಯರ್ | | | | | | |
| 5 | ಶೀಘ್ರಲಿಪಿಗಾರ/ಕಂಪ್ಯೂಟರ್ ಆಪರೇಟರ್ | 467-00 | 12142-00 | 455-00 | 11830-00 | 424-00 | 11024-00 |
| 6 | ಸ್ಟೋರ್ ಕೀಪರ್ | | | | | | |
| 7 | ಬೆರಳಚ್ಚುಗಾರ/ಡಾಟಾ ಎಂಟ್ರೀ ಆಪರೇಟರ್ | 458-00 | 11908-00 | 446-00 | 11596-00 | 416-00 | 10816-00 |
| 8 | ಗುಮಾಸ್ತ/ಕ್ಲರ್ಕ/ ದೂರವಾಣಿ ನಿರ್ವಾಹಕ | | | | | | |
| 9 | ಆಫೀಸ್‌ಬಾಯ್/ಪ್ಯೂನ್/ ವಾಚಮನ್/ ಅಟೆಂಡರ್/ಸ್ವೀಪರ್ | 385-00 | 10010-00 | 375-00 | 9750-00 | 350-00 | 9100-00 |

**ತುಟ್ಟಿಭತ್ಯೆ:-**

ಈ ಅಧಿಸೂಚನೆಯಲ್ಲಿ ಪ್ರಕಟಿಸಿರುವ ದರಗಳು ರಾಜ್ಯ ಸರಾಸರಿ ಗ್ರಾಹಕ ಬೆಲೆ ಸೂಚ್ಯಾಂಕ (1960–100) 6205 ಅಂಶಗಳಿಗೆ ವಿಲೀನಗೊಳಿಸಲಾಗಿದೆ. ರಾಜ್ಯ ಸರಾಸರಿ ಗ್ರಾಹಕ ಬೆಲೆ ಸೂಚ್ಯಾಂಕ 6205 ಅಂಶಗಳಿಗಿಂತ ಹೆಚ್ಚಾಗುವ ಪ್ರತಿ ಅಂಶಕ್ಕೆ ಎಲ್ಲಾ ವರ್ಗದ ಕಾರ್ಮಿಕರಿಗೆ ದಿನ ಒಂದಕ್ಕೆ 4 ಪೈಸೆಯಂತೆ ತುಟ್ಟಿ ಭತ್ಯೆ ಪಾವತಿಸತಕ್ಕದ್ದು.

ತುಟ್ಟಿಭತ್ಯೆ ಲೆಕ್ಕಾಚಾರವನ್ನು ವರ್ಷಕ್ಕೊಮ್ಮೆ ಮಾಡಲಾಗುತ್ತದೆ: ಹಿಂದಿನ ಕ್ಯಾಲೆಂಡರ್ ವರ್ಷದ 12 ತಿಂಗಳುಗಳ ಗ್ರಾಹಕ ಬೆಲೆ ಸೂಚ್ಯಾಂಕಗಳ ಸರಾಸರಿ ಆಧಾರದ ಮೇಲೆ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರತಿ ವರ್ಷ ಲೆಕ್ಕಾಚಾರ ಮಾಡತಕ್ಕದ್ದು. ಅಲ್ಲದೇ ಗ್ರಾಹಕ ಬೆಲೆ ಸೂಚ್ಯಾಂಕಗಳ ಸಂಖ್ಯೆಯ ವಾರ್ಷಿಕ ಸರಾಸರಿ ಆಧಾರದ ಮೇಲೆ ಹೆಚ್ಚುವರಿಯಾದ ಅಥವಾ ಕಡಿಮೆಯಾದ ಪ್ರಮಾಣವನ್ನು ಆಧರಿಸಿ ಲೆಕ್ಕ ಹಾಕಲಾಗುತ್ತದೆ. ಆದ್ದರಿಂದ ಮೊದಲ ಲೆಕ್ಕಾಚಾರವು ಗ್ರಾಹಕ ಬೆಲೆ ಸೂಚ್ಯಾಂಕದ (ಜನವರಿ 2015 ರಿಂದ ಡಿಸೆಂಬರ್ 2015) ಸರಾಸರಿ ಆಧಾರದ ಮೇಲೆ 2016 ಏಪ್ರಿಲ್ 1 ನೇ ತಾರೀಖಿನಿಂದ ಜಾರಿಗೆ ಬರುತ್ತದೆ.

1. ದಿನಗೂಲಿ ಗಳಿಕೆದಾರರ ಸಂದರ್ಭದಲ್ಲಿ ಮಾಸಿಕ ವೇತನ ದರಗಳನ್ನು 26 ದಿನಗಳಿಂದ ವಿಭಾಗಿಸಿ, 4 ರಜಾ ದಿನಗಳಿಗೆ ವೇತನವನ್ನು ನೀಡುವುದೂ ಸೇರಿದಂತೆ ಲೆಕ್ಕ ಹಾಕತಕ್ಕದ್ದು.

ತುಟ್ಟಿಭತ್ಯೆಯನ್ನು ಲೆಕ್ಕಾಚಾರ ಮಾಡುವ ವಿಧಾನ:-

**ಅ) ಮಾಸಿಕ ವೇತನವನ್ನು ಪಡೆಯುವವರು:-** ಪ್ರತಿ ವರ್ಷ ಹೆಚ್ಚಾಗುವ ಸಿ ಪಿ ಐ ಅಂಶಗಳು X ತುಟ್ಟಿಭತ್ಯೆಯ ದರ X 30 ದಿನಗಳು= ತಿಂಗಳ ತುಟ್ಟಿಭತ್ಯೆ

**ಆ) ದಿನಗೂಲಿ ವೇತನ ಪಡೆಯುವವರು :-**

ಪ್ರತಿ ವರ್ಷ ಹೆಚ್ಚಾಗುವ ಅಂಶಗಳು X ತುಟ್ಟಿಭತ್ಯೆಯ ದರ X 30 = ದಿನದ ತುಟ್ಟಿಭತ್ಯೆ

26

2. ಮಹಿಳೆಯರು ಮತ್ತು ಪುರುಷರು ಒಂದೇ ರೀತಿಯ ಕೆಲಸವನ್ನು ನಿರ್ವಹಿಸಿದ ಸಂದರ್ಭಗಳಲ್ಲಿ ಉಭಯತ್ರರಿಗೂ ಸಮಾನ ದರದ ವೇತನಗಳನ್ನು ಸಂದಾಯ ಮಾಡತಕ್ಕದ್ದು
3. ಪ್ರಸ್ತುತ ಪಾವತಿಸುತ್ತಿರುವ ವೇತನ ದರವು ಹೆಚ್ಚಾಗಿದ್ದಲ್ಲಿ ಆ ವೇತನ ದರಗಳನ್ನು ಸಂದಾಯ ಮಾಡುವುದನ್ನು ಮುಂದುವರೆಸತಕ್ಕದ್ದು ಹಾಗೂ ಕಡ್ಡಾಯವಾಗಿ ಕಾಲಕಾಲಕ್ಕೆ ಹೆಚ್ಚಾಗುವ ತುಟ್ಟಿಭತ್ಯೆಯನ್ನು ಸಹ ಪಾವತಿಸತಕ್ಕದ್ದು.
4. ಅಧಿಸೂಚನೆಯಲ್ಲಿ ವರ್ಗವನ್ನು ನಮೂದಿಸದೆ ಇರುವ ವರ್ಗಗಳ ಕಾರ್ಮಿಕರಿಗೆ ಅದೇ ಸ್ವರೂಪದ ಕೆಲಸ ನಿರ್ವಹಿಸುತ್ತಿರುವ ಇತರೆ ವರ್ಗದ ಕಾರ್ಮಿಕರಿಗೆ ಪಾವತಿ ಮಾಡುತ್ತಿರುವ ವೇತನವನ್ನು ಸಂದಾಯ ಮಾಡತಕ್ಕದ್ದು.

ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ 8 ಗಂಟೆಗಳ ಕೆಲಸದ ವೇತನವು ಅದೇ ತರಹದ ಕೆಲಸ ಮಾಡು
5. ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು
ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 8 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ
ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ಆಧಾರದ ಮೇಲೆ ಲೆಕ್ಕ ಹಾಕುವುದು.

ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ದರವನ್ನು 26
6. ದಿನಗೂಲಿ ನೌಕರರಿಗೆ ಅವರ ದಿನದ ವೇತನ ದರಗಳನ್ನು ಕಂಡು ಹಿಡಿಯಬೇಕಾದಲ್ಲಿ ತಿಂಗಳ ವೇತನ ದರವನ್ನು 26 ದಿನಗಳಿಂದ ಭಾಗಿಸಬೇಕು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

7. ಸಂಸ್ಥೆಯಲ್ಲಿ ನಿಗದಿಪಡಿಸಿರುವ ವಾರದ ರಜೆ ಅಥವಾ ಹಬ್ಬದ ರಜಾ ದಿನಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟು ಸಾಮಾನ್ಯ ವೇತನದ ಎರಡುಪಟ್ಟು ವೇತನವನ್ನು ಪಾವತಿ ಮಾಡತಕ್ಕದ್ದು.

8. ಕೆಲಸಗಾರರು ದಿನದ ನಿಗಧಿತ ಅವಧಿಗಿಂತ ಹೆಚ್ಚು ಸಮಯ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿ ಕೆಲಸಕ್ಕೆ ಅವರ ವೇತನದ ಎರಡುಪಟ್ಟು ವೇತನವನ್ನು ಪಾವತಿಸತಕ್ಕದ್ದು.

9. ವೇತನ ಲೆಕ್ಕಾಚಾರದಲ್ಲಿ ಚಿಲ್ಲರೆ ಬಂದ ಪಕ್ಷದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

10. ಟ್ರೈನಿಗಳಿಗೆ ಆ ವರ್ಗದ ನೌಕರರು ಪಡೆಯುತ್ತಿರುವ ವೇತನದ ಪ್ರತಿಶತ 75 ರಷ್ಟು ವೇತನವನ್ನು ಶಿಷ್ಯ ವೇತನವನ್ನಾಗಿ ಪಾವತಿಸತಕ್ಕದ್ದು.

11. ಈ ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ವೇತನ ದರಗಳನ್ನು ಮತ್ತು ಕಾಲಕಾಲಕ್ಕೆ ಹೆಚ್ಚಾಗುವ ತುಟ್ಟಿಭತ್ಯೆಯನ್ನು ಆಯಾ ಅಂಕಣಗಳಲ್ಲಿಯೇ ನಮೂದಿಸಿ ಪಾವತಿ ಮಾಡತಕ್ಕದ್ದು.

ಅತಿ ಕುಶಲ ಕೆಲಸಗಾರರು ಎಂದರೆ ಯಾರು ಹೆಚ್ಚಿನ ನೈಪುಣ್ಯತೆ ಕೆಲಸವನ್ನು ಅತಿ ಹೆಚ್ಚು ನಿಖರವಾಗಿ
12. **ಅತಿ ಕುಶಲ:** ಅತಿ ಕುಶಲ ಕೆಲಸಗಾರರು ಎಂದರೆ ಯಾರು ಹೆಚ್ಚಿನ ನೈಪುಣ್ಯತೆ ಕೆಲಸವನ್ನು ಅತಿ ಹೆಚ್ಚು ನಿಖರವಾಗಿ ಮಾಡಬಲ್ಲವರಾಗಿದ್ದು, ನಕ್ಷೆಯನ್ನು ಓದಬಲ್ಲ ಮತ್ತು ಅದರ ಆಧಾರದ ಮೇಲೆ ಕೆಲಸ ಮಾಡಬಲ್ಲವರಾಗಿದ್ದು, ಅವರ ವಿಭಾಗದ
ಮಾಡಬಲ್ಲವರಾಗಿದ್ದು, ನಕ್ಷೆಯನ್ನು ಓದಬಲ್ಲ ಮತ್ತು ಅದರ ಆಧಾರದ ಮೇಲೆ ಕೆಲಸ ಮಾಡಬಲ್ಲವರಾಗಿದ್ದು, ಆ ವಿಭಾಗದ ಕೆಲಸವನ್ನು 'ಕುಶಲ' ಮತ್ತು ಇತರೇ ಕೆಲಸಗಾರರ ಕೆಲಸವನ್ನು ನಿರ್ದೇಶಿಸಬಲ್ಲ ಸಾಮರ್ಥ್ಯವುಳ್ಳವರಾಗಿದ್ದು, ಆ ವಿಭಾಗದ ಕೆಲಸವನ್ನು ಸ್ವತಂತ್ರವಾಗಿ ನಿರ್ವಹಿಸಿ ಕೊಂಡು ಹೋಗಬಲ್ಲವರಾಗಿರಬೇಕು.

ಸ್ವತಂತ್ರವಾಗಿ ಹಾಗೂ ಪರಿಣಾಮಕಾರಿಯಾಗಿ ಮತ್ತು ಕೆಲಸವನ್ನು ಸರಿಯಾಗಿ ಮಾಡಬಲ್ಲ
13. **ಕುಶಲ:** ಕುಶಲ ಕೆಲಸಗಾರರು ಅಂದರೆ ಸ್ವತಂತ್ರವಾಗಿ ಹಾಗೂ ಪರಿಣಾಮಕಾರಿಯಾಗಿ ಮತ್ತು ಕೆಲಸವನ್ನು ಸರಿಯಾಗಿ ಮಾಡಬಲ್ಲ ಸಾಮರ್ಥ್ಯವುಳ್ಳ ಕಾರ್ಮಿಕ. ಅವಶ್ಯ ಬಿದ್ದರೆ ಸರಳವಾದ ನಕ್ಷೆಗಳನ್ನು ಓದಿ, ಕೆಲಸ ಮಾಡುವ ಸಾಮರ್ಥ್ಯವುಳ್ಳವನಾಗಿರಬೇಕು.

14. **ಅರೆ ಕುಶಲ** : ತನ್ನ ಕಸುಬಿನ ಬಗ್ಗೆ ಸಾಕಷ್ಟು ಜ್ಞಾನವಿರುವ ಹಾಗೂ ಪುನರಾವರ್ತನೆ ಕೆಲಸ ಮಾಡುವ ಸಾಮರ್ಥ್ಯವುಳ್ಳ ಹಾಗೂ ಯಂತ್ರೋಪಕರಣಗಳ ಸಹಾಯದಿಂದ ಸರಳವಾದ ಕೆಲಸಗಳನ್ನು ಮಾಡಬಲ್ಲವರು.

15. **ಕುಶಲರಲ್ಲದವರು** : ಸ್ವತಂತ್ರವಾದ ನಿರ್ಣಯದ ಅವಶ್ಯಕತೆಯಿಲ್ಲದ ಅಥವಾ ಹಿಂದಿನ ಅನುಭವ ಇಲ್ಲದೆ ಆದರೆ ಉದ್ಯೋಗದ ವಾತಾವರಣದ ಪರಿಚಯವಿರುವ ಕೆಲಸ ಮಾಡುವುದು. ದೈಹಿಕ ಪರಿಶ್ರಮವಿಲ್ಲದೆ ವಿವಿಧ ರೀತಿಯ ವಸ್ತುಗಳು ಮತ್ತು ಸಾಮಾನ್ಯ ಜ್ಞಾನವಿರುವ ಕೆಲಸವನ್ನು ಮಾಡುವವರು.

ಯಾವುದೇ ಯಂತ್ರಗಳನ್ನು ನಡೆಸಲು ನೇಮಿಸಿದ್ದ ಕಾರ್ಮಿಕರನ್ನು ಕುಶಲರಲ್ಲದ ವರ್ಗಕ್ಕೆ ಸೇರಿಸಬಾರದು. ಕಾವಲುಗಾರ, ಸಿಪಾಯಿ, ಚೌಕೀದಾರ, ಕಸ ಗುಡಿಸುವವರು, ಜಾಡಮಾಲಿ ಹಾಗೂ ಅದೇ ತರಹದ ಕೆಲಸ ಮಾಡುವ ಕಾರ್ಮಿಕರನ್ನು ಕುಶಲರಲ್ಲದ ವರ್ಗಕ್ಕೆ ಸೇರಿಸಬಹುದು.

**ವಲಯ-1:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು ಮತ್ತು ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು

**ವಲಯ-2:** ವಲಯ-1ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು.

**ವಲಯ-3:** ವಲಯ-1 ಮತ್ತು ವಲಯ-2 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಇತರೆ ಎಲ್ಲಾ ಪ್ರದೇಶಗಳು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ.

**ಎ.ಎನ್.ರಾಧಾಮಣಿ**
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿಶ) ಪ್ರತಿಗಳು: 200